# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1017 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 17.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಇರುವ ಸರ್ಕಾರ ರಚನೆಯಾದ ಮೇಲೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ನೀಡಲಾಗಿದೆ; (ಮಾಹಿತಿ ನೀಡುವುದು) | ಪ್ರಸ್ತುತ ಇರುವ ಸರ್ಕಾರ ರಚನೆಯಾದ ಮೇಲೆ ಕಲಬುರಗಿ ಜಿಲ್ಲೆಯಲ್ಲಿ 10,588 ಮತ್ತು ಯಾದಗಿರಿ ಜಿಲ್ಲೆಯಲ್ಲಿ 5038 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. |
| ಆ | ಸಾರ್ವಜನಿಕರಿಂದ ಹೊಸ ಬಿ.ಪಿ.ಎಲ್ ಪಡಿತರ ಚೀಟಿಗಳಿಗೆ ಬೇಡಿಕೆ ಕೇಳಿ ಬರುತ್ತಿದ್ದು, ಹೊಸ ಬಿ.ಪಿ.ಎಲ್ ಪಡಿತರ ಚೀಟಿ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕೇಂದ್ರ ಸರ್ಕಾರದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ-2013ರಡಿ ಕರ್ನಾಟಕ ರಾಜ್ಯದಲ್ಲಿ 4,01,93,000 ಫಲಾನುಭವಿಗಳಿಗೆ ಪಡಿತರ ವಿತರಿಸಲು ಗುರಿಯನ್ನು ನಿಗಧಿ ಪಡಿಸಲಾಗಿರುತ್ತದೆ. ಆದರೆ ರಾಜ್ಯದಲ್ಲಿ 4,50,59,460 ಫಲಾನುಭವಿಗಳಿಗೆ ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದೆ. ಆದ್ದರಿಂದ ಈಗಾಗಲೇ ಪಿ.ಹೆಚ್.ಹೆಚ್ ಪಡಿತರ ಚೀಟಿ ಪಡೆದಿರುವವರಲ್ಲಿ ಅನರ್ಹರನ್ನು ಪತ್ತೆ ಹಚ್ಚುವ ಕಾರ್ಯವು ನಿರಂತರವಾಗಿ ನಡೆಯುತ್ತಿದ್ದು ಅನರ್ಹ ಪಡಿತರ ಚೀಟಿಯನ್ನು ರದ್ದು ಪಡಿಸಿದ್ದಲ್ಲಿ ಅಷ್ಟೇ ಪ್ರಮಾಣದ ಹೊಸ ಪಡಿತರ ಚೀಟಿ ನೀಡಲು ಅವಕಾಶವಿರುತ್ತದೆ.<br>• ತುರ್ತು ವೈದ್ಯಕೀಯ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಅರ್ಹರಿಗೆ ಆದ್ಯತಾ ಪಡಿತರ ಚೀಟಿ ನೀಡಲು ಹಾಗೂ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ.<br>• ಇ-ಶ್ರಮ್ ನೊಂದಾಯಿತ ಕಾರ್ಮಿಕರಿಗೆ ಹಾಗೂ ಬುಡಕಟ್ಟು ಜನಾಂಗದವರಿಗೆ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ.<br>• ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ನಿರಂತರವಾಗಿ ಅವಕಾಶ ಕಲ್ಪಿಸಲಾಗಿದೆ. |

| | | |
|---|---|---|
| ಇ | ಹೊಸ ಬಿ.ಪಿ.ಎಲ್ ಪಡಿತರ ಚೀಟಿ ನೀಡಲು ಸರ್ಕಾರ ಅನುಸರಿಸುವ ಮಾನದಂಡಗಳೇನು; | ಯಾವುದೇ ಅರ್ಹ ಆದ್ಯತಾ ಪಡಿತರ ಚೀಟಿ (PHH) ಪಡಿತರ ಚೀಟಿಗಳನ್ನು ರದ್ದು ಪಡಿಸಿರುವುದಿಲ್ಲ.<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಆದೇಶ ಸಂಖ್ಯೆ ಆನಾಸ 116 ಡಿಆರ್‌ಎ 2015, ದಿನಾಂಕ: 25.03.2017 ರಲ್ಲಿ ಸರ್ಕಾರವು ಈ ಕೆಳಕಂಡ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು /ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಈ | ಅನರ್ಹ ಫಲಾನುಭವಿಗಳಿಗೆ ಬಿ.ಪಿ.ಎಲ್ ಪಡಿತರ ಚೀಟಿ ನೀಡಿದ್ದು, ಅರ್ಹ ಫಲಾನುಭವಿಗಳು ಬಿ.ಪಿ.ಎಲ್ ಪಡಿತರ ಚೀಟಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಿ.ಪಿ.ಎಲ್ ಪಡಿತರ ಚೀಟಿಯಿಂದ ವಂಚಿತರಾಗಿರುವ ಫಲಾನುಭವಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸರ್ಕಾರದ ಮಾನದಂಡಗಳನ್ವಯ ಕುಟುಂಬ ತಂತ್ರಾಂಶದಿಂದ ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ರೂ.1.20 ಲಕ್ಷಕ್ಕಿಂತ ಆದಾಯ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರುಗಳು ಹೊಂದಿದ್ದಂತಹ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆದು, ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿತ್ತು. |

| | | |
|---|---|---|
| | | ದಿನಾಂಕ: 22.11.2024 ರ ಪತ್ರದಲ್ಲಿ ನೀಡಿದ ನಿರ್ದೇಶನದಂತೆ ರಾಜ್ಯದಲ್ಲಿ ಆದಾಯ ತೆರಿಗೆ ಪಾವತಿದಾರರು ಹಾಗೂ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಹಿಂದಿನಂತೆಯೇ ಆದ್ಯತಾ ಪಡಿತರ ಚೀಟಿಗಳನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ |

ಇ-ಆನಾಸ 98 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು